KARNATAKA LEGISLATIVE ASSEMBLY RESEARCH AND REFERENCE BRANCH
PAPER CLIPPINGS
DEPARTMENT / SUBJECT:
NAME OF THE NEWS PAPER:
DATE : 24/3/2020

# ದಲ್ಲಾಳಿ ಹಾವಳಿ ನಿಯಂತ್ರಿಸಲು ಕ್ರಮ

**ವಿಧಾನಸಭೆ:** ಉಪನೋಂದಣಾಧಿಕಾರಿ ಕಚೇರಿಗಳಲ್ಲಿ ದಲ್ಲಾಳಿ ಹಾವಳಿ ನಿಯಂತ್ರಣಕ್ಕೆ ಹಂತ ಹಂತವಾಗಿ ಕ್ರಮ ಕೈಗೊಳ್ಳಲಾಗುತ್ತಿದ್ದು, ಆಸ್ತಿ ನೋಂದಣಿ ಸೇರಿದಂತೆ ಇತರ ಸೇವೆಗಳನ್ನು ಆನ್‌ಲೈನ್ ಮೂಲಕ ಪಡೆಯುವ ವ್ಯವಸ್ಥೆಯನ್ನು ರಾಜ್ಯಾದ್ಯಂತ ಜಾರಿಗೊಳಿಸಲು ಚಿಂತನೆ ನಡೆಸಲಾಗಿದೆ ಎಂದು ಕಂದಾಯ ಸಚಿವ ಆರ್. ಅಶೋಕ್ ಹೇಳಿದರು.

**▪ ರಾಜ್ಯಾದ್ಯಂತ ಆನ್‌ಲೈನ್ ವ್ಯವಸ್ಥೆ ಜಾರಿಗೆ ಚಿಂತನೆ: ಅಶೋಕ್**

ಬಿಜೆಪಿಯ ಎಂ.ಪಿ.ಕುಮಾರಸ್ವಾಮಿ ಪ್ರಶ್ನೆಗೆ ಸೋಮವಾರ ಉತ್ತರಿಸಿ, ಉಪನೋಂದಣಾಧಿಕಾರಿ ಕಚೇರಿಗಳಲ್ಲಿ ದಲ್ಲಾಳಿಗಳ ಹಾವಳಿ ಹಿಂದಿನಿಂದ ನಡೆದುಬಂದಿದ್ದು, ದಂಧೆ ಹೇಗೆ ನಡೆಯುತ್ತದೆ ಎಂದು



ಸದನದಲ್ಲಿ ಆರ್.ಅಶೋಕ್ ಮಾತನಾಡಿದರು.

ನೋಡಿದ್ದೇವೆ. ಅದನ್ನು ನಿಯಂತ್ರಿಸಲು ಸಾಕಷ್ಟು ಕ್ರಮ ಕೈಗೊಳ್ಳಲಾಗಿದೆ. ಆಯ್ದ ಸೇವೆಗಳನ್ನು ಆನ್‌ಲೈನ್‌ನಲ್ಲೇ ಪಡೆಯುವ ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದರು.

ಇದಕ್ಕೂ ಮೊದಲು ಎಂ.ಪಿ.ಕುಮಾರ ಸ್ವಾಮಿ, ಉಪನೋಂದಣಾಧಿಕಾರಿ ಕಚೇರಿಗಳಲ್ಲಿ ದಲ್ಲಾಳಿಗಳ ಹಾವಳಿ ತೀವ್ರವಾಗಿದೆ. ಆನ್‌ಲೈನ್ ವ್ಯವಸ್ಥೆ ತಂದರೂ ಇದಕ್ಕೆ ಕಡಿವಾಣ ಬಿದ್ದಿಲ್ಲ ಎಂದರು.

**ಐಷಾರಾಮಿ ಕಾರಿನಲ್ಲಿ ಬರುತ್ತಾರೆ!:** ಜೆಡಿಎಸ್‌ನ ಡಾ.ಕೆ.ಅನ್ನದಾನಿ, ಉಪನೋಂದಣಾಧಿಕಾರಿ ಕಚೇರಿ ಹಾಗೂ ತಾಲೂಕು ಕಚೇರಿಗಳು ಭ್ರಷ್ಟಾಚಾರದ ಕೂಪಗಳಾಗಿವೆ. ಜನಪ್ರತಿನಿಧಿಗಳು ಹೇಳಿದರೂ ಕ್ಯಾರೆ ಎನ್ನದ ಅಧಿಕಾರಿಗಳು ದಲ್ಲಾಳಿಗಳ ಕೆಲಸವನ್ನು ತಕ್ಷಣ ಮಾಡಿಕೊಡುತ್ತಾರೆ. ಸಚಿವ ಆರ್.ಅಶೋಕ್ ಅವರ ಕಾರು ಯಾವುದೋ ಗೊತ್ತಿಲ್ಲ, ಆದರೆ ದಲ್ಲಾಳಿಗಳು ಐಷಾರಾಮಿ ಕಾರುಗಳಲ್ಲಿ ಓಡಾಡುತ್ತಾರೆ. ದಲ್ಲಾಳಿಗಳಿಗೆ ಕಡಿವಾಣ ಹಾಕದಿದ್ದರೆ ಜನಪ್ರತಿನಿಧಿಗಳಿಗೆ ಗೌರವವಿರುವುದಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಕಾಂಗ್ರೆಸ್‌ನ ಆರ್.ವಿ.ದೇಶಪಾಂಡೆ, ನಾನು ಕಂದಾಯ ಸಚಿವನಾಗಿದ್ದಾಗ ಪ್ರಾಯೋಗಿಕವಾಗಿ ಕೆಲವೆಡೆ ಆನ್‌ಲೈನ್‌ನಲ್ಲೇ ಆಸ್ತಿ ನೋಂದಣಿ ವ್ಯವಸ್ಥೆ ಜಾರಿಗೊಳಿಸಲಾಗಿತ್ತು. ಅದಕ್ಕೆ ಸಾಕಷ್ಟು ವಿರೋಧವಿದ್ದರೂ ಜಾರಿಗೊಳಿಸಲಾಗಿತ್ತು. ಆನ್‌ಲೈನ್ ವ್ಯವಸ್ಥೆಯನ್ನು ರಾಜ್ಯಾದ್ಯಂತ ಜಾರಿಗೊಳಿಸಿದರೆ ದಲ್ಲಾಳಿಗಳಿಗೆ ಕಡಿವಾಣ ಬೀಳಲಿದೆ ಎಂದರು.

ಬಳಿಕ ಪ್ರತಿಕ್ರಿಯಿಸಿದ ಆರ್.ಅಶೋಕ್, ಹಲವು ಸೇವೆಗಳು ಆನ್‌ಲೈನ್‌ನಲ್ಲಿ ಲಭ್ಯವಿದ್ದರೂ ಹೆಚ್ಚಿನ ಸ್ಪಂದನೆ ಇಲ್ಲ. ಹಾಗಿದ್ದರೂ ಎಲ್ಲೆಡೆ ಆನ್‌ಲೈನ್‌ನಲ್ಲಿ ಸೇವೆ ಜತೆಗೆ ಆಸ್ತಿ ನೋಂದಣಿಯನ್ನು ಆನ್‌ಲೈನ್‌ನಲ್ಲೇ ಪಡೆಯುವ ವ್ಯವಸ್ಥೆ ಜಾರಿಗೊಳಿಸುವ ಚಿಂತನೆ ಇದೆ. ಹಂತ ಹಂತವಾಗಿ ಇದನ್ನು ವಿಸ್ತರಿಸಲಾಗುವುದು ಎಂದು ಹೇಳಿದರು.